3.	Shikaripura	05	Rs. 1,00,000.00
4.	Sagar	02	Rs. 40,000.00
5.	Soraba	01	Rs. 20,000.00
6.	Thirthahalli	03	Rs. 60,000.00
	Total	**20**	**Rs. 4,20,000.00**

55(316) ಶ್ರೀ ಹಾಲಪ್ಪ ಹೆಚ್. (ಹೊಸನಗರ) : ಮಾನ್ಯ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಇದುವರೆವಿಗೆ ಎಷ್ಟು ಹಣ ಖರ್ಚಾಗಿದೆ?

ಆ) ಜೋಗ್ ಅಭಿವೃದ್ಧಿ ಪ್ರಾಧಿಕಾರ ಯೋಜನೆ ಯಾವ ಹಂತದಲ್ಲಿದೆ?

ಶ್ರೀ ಡಿ.ಟಿ. ಜಯಕುಮಾರ್ (ಪ್ರವಾಸೋದ್ಯಮ ಸಚಿವರು) :

ಅ) 1. ಇದುವರೆಗೆ ಪ್ರವಾಸೋದ್ಯಮ ಇಲಾಖೆಯಿಂದ ರೂ. 315.59 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

2. ಜೋಗ್ ನಿರ್ವಹಣೆ ಪ್ರಾಧಿಕಾರದಿಂದ ರೂ.115.70 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

ಆ) ಸರ್ಕಾರ ಜೋಗ್ ನಿರ್ವಹಣೆ ಪ್ರಾಧಿಕಾರ ರಚಿಸಿದ್ದು, ಜೋಗ್ ಸಮೀಪ ಲಿಂಗನಮಕ್ಕಿ ಜಲಶಾಯದ ಬಳಿ ಅಂತರರಾಷ್ಟ್ರೀಯ ಮಟ್ಟದ ಉದ್ಯಾನವನವನ್ನು ಅಭಿವೃದ್ಧಿ ಪಡಿಸುವ ಯೋಜನೆ ಹಮ್ಮಿಕೊಂಡಿದ್ದು, ಟೆಂಡರ್ ಕರೆಯುವ ಪ್ರಕ್ರಿಯೆ ಪ್ರಗತಿಯಲ್ಲಿದೆ.

56(467) ಶ್ರೀ ಹಾಲಪ್ಪ ಹೆಚ್. (ಹೊಸನಗರ) : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ನಬಾರ್ಡ್ ಯೋಜನೆ ಮತ್ತು 60.ಸಿ. ಯೋಜನೆಯಡಿಯಲ್ಲಿ ಯಾವ ಯಾವ ರಸ್ತೆ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ.

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಲೋಕೋಪಯೋಗಿ ಇಲಾಖೆಯಡಿ ಶಿವಮೊಗ್ಗ ಜಿಲ್ಲೆಯಲ್ಲಿ ಆರ್.ಐ.ಡಿ.ಎಫ್-2 ರಿಂದ 9 ರವರೆಗೆ ಒಟ್ಟಾರೆ 67 ರಸ್ತೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಈ ಪೈಕಿ 61 ಕಾಮಗಾರಿಗಳು ಪೂರ್ಣಗೊಂಡಿವೆ.

ಪ್ರಸ್ತುತ 2004-05ನೇ ವರ್ಷದಲ್ಲಿ 1018 ಲಕ್ಷ ರೂ. ಮೊತ್ತದ 20 ರಸ್ತೆ ಕಾಮಗಾರಿಗಳ ಪ್ರಸ್ತಾವನೆಯನ್ನು ನಬಾರ್ಡ್‌ಗೆ ಸಲ್ಲಿಸಲಾಗಿದ್ದು, ನಬಾರ್ಡ್‌ನಿಂದ ಅನುಮೋದನೆ ನಿರೀಕ್ಷಿಸಲಾಗಿದೆ.

ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ "60.ಸಿ" ಎಂಬ ಯಾವುದೇ ಯೋಜನೆ ಇರುವುದಿಲ್ಲ.

57(868) ಶ್ರೀ ಹಾಲಪ್ಪ ಹೆಚ್. (ಹೊಸನಗರ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಮದ್ಯದ ಅಂಗಡಿ ಸಿಎಲ್-2 ಮತ್ತು ಬಾರ್ ಸಿಎಲ್-9 ಗಳ ಸಂಖ್ಯೆ ಎಷ್ಟು: